ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(18)

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನಿ ಮೋದಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 25/2/21

# ರೈತರ ಆದಾಯ ದುಪ್ಪಟ್ಟುಗೊಳಿಸಲು ಎಲ್ಲ ಪ್ರಯತ್ನ: ಪ್ರಧಾನಿ ಮೋದಿ

25/2/21



**ಕಿಸಾನ್ ಸಮ್ಮಾನ್‌ಗೆ 2 ವರ್ಷ ಪೂರ್ಣ ಹಿನ್ನೆಲೆ ಸರಣಿ ಟ್ವೀಟ್**

ನವದೆಹಲಿ: 'ರೈತರ ಬೆಳೆಗೆ ಅತಿಹೆಚ್ಚು ಕನಿಷ್ಠ ಬೆಂಬಲ ಬೆಲೆ ನೀಡಿದ್ದು ನಮ್ಮ ಸರ್ಕಾರ. ರೈತರ ಆದಾಯವನ್ನು ದುಪ್ಪಟ್ಟುಗೊಳಿಸಲೂ ನಾವು ಎಲ್ಲ ರೀತಿಯ ಕ್ರಮ ಕೈಗೊಳ್ಳುತ್ತಿದ್ದೇವೆ' ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಗೆ ಬುಧವಾರ 2 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಸರಣಿ ಟ್ವೀಟ್ ಮಾಡಿರುವ ಅವರು, ಕಳೆದ 7 ವರ್ಷಗಳಲ್ಲಿ ಸರ್ಕಾರವು ಕೃಷಿ ಕ್ಷೇತ್ರದಲ್ಲಿ ಹೊಸ ಬದಲಾವಣೆ ತರಲು ಅನೇಕ ಕ್ರಮಗಳನ್ನು ಕೈಗೊಂಡಿದೆ. ಉತ್ತಮ ನೀರಾವರಿಯಿಂದ, ಹೆಚ್ಚೆಚ್ಚು ತಂತ್ರಜ್ಞಾನಗಳ ಬಳಕೆ, ಹೆಚ್ಚು ಸಾಲ, ಬೆಳೆ ವಿಮೆ, ಮಧ್ಯವರ್ತಿಗಳ ನಿರ್ಮೂಲನೆ ಸೇರಿದಂತೆ ಕೃಷಿ ಕ್ಷೇತ್ರಕ್ಕೆ ಉತ್ತೇಜನ ನೀಡುವ ಅನೇಕ ಹೆಜ್ಜೆಗಳನ್ನು ಇಟ್ಟಿದ್ದೇವೆ ಎಂದೂ ಹೇಳಿದ್ದಾರೆ.

**ಮಾತುಕತೆಗೆ ಸಿದ್ಧ:** ಇನ್ನೊಂದೆಡೆ, ಕೇಂದ್ರದ ಕೃಷಿ ಕಾಯ್ದೆಗಳನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿರುವ ರೈತರು ಸರ್ಕಾರದ ಆಫರ್ ಬಗ್ಗೆ ಪ್ರತಿಕ್ರಿಯೆ ನೀಡಿದರಷ್ಟೇ ನಾವು ಮಾತುಕತೆ ನಡೆಸಲು ಸಿದ್ಧ ಎಂದು ಕೇಂದ್ರ ಕೃಷಿ ಸಚಿವ ತೋಮರ್ ಬುಧವಾರ ತಿಳಿಸಿದ್ದಾರೆ. ಉತ್ತರಪ್ರದೇಶದಲ್ಲಿ ಮಾತನಾಡಿರುವ ರೈತರ ನಾಯಕ ನರೇಶ್ ಟಿಕಾಯತ್, 'ರಕ್ಷಣಾ ಸಚಿವ ರಾಜನಾಥ್ ಅವರು ಪಂಜರದೊಳಗಿನ ಗಿಣಿಯಂತಾಗಿದ್ದಾರೆ. ಅವರಿಗೆ ಸ್ವಾತಂತ್ರ್ಯ ಕೊಟ್ಟಿದ್ದರೆ ಅವರು ರೈತರೊಂದಿಗೆ ಮಾತನಾಡಿ ವಿವಾದ ಬಗೆಹರಿಸುತ್ತಿದ್ದರು' ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಟ್ರ್ಯಾಕ್ಟರ್ ಪರೇಡ್ ವೇಳೆ ನಡೆದ ಹಿಂಸಾಚಾರಕ್ಕೆ ಸಂಬಂಧಿಸಿ 19 ಮಂದಿಯನ್ನು ಬಂಧಿಸಿ, 25 ಎಫ್‌ಐಆರ್ ದಾಖಲಿಸಲಾಗಿದೆ ಎಂದು ಹೈಕೋರ್ಟ್‌ಗೆ ಸರ್ಕಾರ ತಿಳಿಸಿದೆ.